# ಸುಧಾಕರ್ ಮೇಲೆ ಹಲ್ಲೆ: ಅರ್ಜಿ ವಿಭಾಗೀಯ ಪೀಠಕ್ಕೆ

ಉ.ವಾ 15/8/19

**ಬೆಂಗಳೂರು:** ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಶಾಸಕರಾಗಿದ್ದು ಸದ್ಯ ಅನರ್ಹಗೊಂಡಿರುವ ಡಾ.ಕೆ.ಸುಧಾಕರ್ ಮೇಲೆ ವಿಧಾನಸೌಧದಲ್ಲಿ ಕಳೆದ ಜು.10ರಂದು ನಡೆದ ಹಲ್ಲೆ ಪ್ರಕರಣದ ಬಗ್ಗೆ ಸಮಗ್ರ ತನಿಖೆಗೆ ಆದೇಶಿಸಬೇಕು ಎಂದು ಕೋರಿ ಸಲ್ಲಿಸಲಾಗಿದ್ದ ಅರ್ಜಿಯನ್ನುಹೈಕೋರ್ಟ್‌ನವಿಭಾಗೀಯ ನ್ಯಾಯಪೀಠಕ್ಕೆ ವರ್ಗಾಯಿಸಲಾಗಿದೆ. ಈ ಕುರಿತು ವಕೀಲ ಎನ್.ಪಿ. ಅಮೃತೇಶ್ ಸಲ್ಲಿಸಿದ್ದ ಅರ್ಜಿಯು ನ್ಯಾ. ಆಲೋಕ್ ಆರಾಧೆ ವಿಚಾರಣೆ ನಡೆಸಿದರು.

'ಇದು ಗಂಭೀರ ವಿಚಾರ, ಜನರನ್ನು ರಕ್ಷಿಸಬೇಕಾದ ಶಾಸಕರ ಮೇಲೆ ಹಲ್ಲೆ ನಡೆದಿದೆ ಎಂದರೆ ಏನರ್ಥ? ಜನರನ್ನು ರಕ್ಷಿಸುವವರು ಯಾರು? ಎಂದು ಮೌಖಿಕವಾಗಿ ಅಭಿಪ್ರಾಯಪಟ್ಟು, ಪ್ರಕರಣವನ್ನು ವಿಭಾಗೀಯ ಪೀಠ ವಿಚಾರಣೆ ನಡೆಸುವುದೇ ಸೂಕ್ತ' ಎಂದು ಕಡತವನ್ನು ಮುಂದಿನ ಆದೇಶಕ್ಕಾಗಿ ಮುಖ್ಯ ನ್ಯಾಯಮೂರ್ತಿಗಳ ಮುಂದೆ ಮಂಡಿಸುವಂತೆ ರಿಜಿಸ್ಟ್ರಾರ್ ಜನರಲ್‌ಗೆ ಸೂಚನೆ ನೀಡಿದರು.

ಅರ್ಜಿದಾರರ ಪರ ವಾದ ಮಂಡಿಸಿದ ವಕೀಲ ಅರುಣ್ ಶ್ಯಾಮ್, ಈ ಪ್ರಕರಣದ ಬಗ್ಗೆ ಅರ್ಜಿದಾರರು ವಿಧಾನಸೌಧ ಠಾಣೆಯಲ್ಲಿ ದೂರು ನೀಡಿದ್ದಾರೆ. ಆದರೆ ಆ ಬಗ್ಗೆ ಎಫ್ಐಆರ್ ದಾಖಲಿಸಿಕೊಂಡು ಸಮಗ್ರ ತನಿಖೆ ನಡೆಸುತ್ತಿಲ್ಲ.ಆ ಬಗ್ಗೆ ಸೂಕ್ತ ಆದೇಶ ನೀಡಬೇಕೆಂದು ಕೋರಿದರು.